# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ :– 06/11/2020 ರಂದು ವಾರ್ಡ್–32ರ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿ

**ಸಭೆಗೆ ಹಾಜರಿದ್ದ ಅಧಿಕಾರಿಗಳು :–**

1. ಶ್ರೀ. ಮಹಮ್ಮದ್ ಅಲಿ, ನೋಡಲ್ ಅಧಿಕಾರಿ
2. ಶ್ರೀ. ಬಸವರಾಜು, ವಾರ್ಡ್ ಸಹಾಯಕ ಅಭಿಯಂತರರು
3. ಶ್ರೀ. ಮುದಾಶೀರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು
4. ಶ್ರೀ. ಅನಿಲ್ ಪ್ರಭು ಹಿರಿಯ ಆರೋಗ್ಯ ಪರೀವಿಕ್ಷಕರು
5. ಶ್ರೀ. ವೇಣುಗೋಪಾಲ ಕಂದಾಯ ನೀರೀಕ್ಷಕರು.
6. ಶ್ರೀ. ದಯಾನಂದ, ಕಿರಿಯ ಆರೋಗ್ಯ ಪರೀವಿಕ್ಷಕರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯ ಕಾರ್ಯದರ್ಶಿ ವಾರ್ಡ್–32 ರವರು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್–32 ರ ವಾರ್ಡ್ ಸಮಿತಿ ಸಭೆಯನ್ನು ಎಲ್. ಆರ್. ಬಂಡೆ ವಾರ್ಡ್ ಕಛೇರಿಯಲ್ಲಿ ವಾರ್ಡ್‌ನ ಸಾರ್ವಜನಿಕರ ಕುಂದು ಕೋರತೆಗಳು ಅಧಿಕಾರಿಗಳ ಜೋತೆಯಲ್ಲಿ ಚರ್ಚಿಸಿದರು. ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ತಿಳಿಸಿರುತ್ತಾರೆ.

- **ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯ ಕಾವೇರಿ ನಗರ 'ಎ' ಬ್ಲಾಕ್ ರಸ್ತೆ ಬದಿಯ ಮೋರಿಯನ್ನು ಡಿಸಿಲ್ಟ್ ಮಾಡಲು ವಾರ್ಡ್ ಇಂಜಿನಿಯರ್‌ರವರಿಗೆ ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯ ದಿನ್ನೂರ್ ಮುಖ್ಯ ರಸ್ತೆಯಲ್ಲಿನ ಕಲ್ವರ್ಟ್ ಡಿಸಿಲ್ಟ್ ಮಾಡಲು ವಾರ್ಡ್ ಇಂಜಿನಿಯರ್‌ರವರಿಗೆ ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯಲ್ಲಿನ ದಿನ್ನೂರು. ಕೆ.ಹೆಚ್.ಬಿ. ಸುಲ್ತಾನ್ ಪಾಳ್ಯ ಮುಖ್ಯ ರಸ್ತೆ ಗುಂಡಿಗಳನ್ನು ಮುಚ್ಚಲು ಕೂಡಲೆ ಕ್ರಮ ವಹಿಸಲು ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳಿಗೆ ಪರಿಹರಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು

- ಘನತ್ಯಾಜ್ಯ ಇಲಾಖೆಗೆ ಸಂಬಂದಿಸಿರುವುದು

1. ವಾರ್ಡ್ ವ್ಯಾಪ್ತಿಯಲ್ಲಿನ ಕೆ.ಹೆಚ್.ಬಿ ಮುಖ್ಯ ರಸ್ತೆಯಲ್ಲಿ ಕಸ ನಿರ್ವಹಣೆ ಸರಿಯಾಗಿ ಮಾಡುತ್ತಿಲ್ಲ. ಕೂಡಲೆ ಈ ಸಮಸ್ಯೆ ಪರಿಹರಿಸಲು ಹಿರಿಯ ಆರೋಗ್ಯ ಪರೀವಿಕ್ಷಕರಿಗೆ ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯ ರಾಘವೇಂದ್ರ ಲೇಔಟ್ 1ನೇ ಕ್ರಾಸ್‌ನಲ್ಲಿ ಅನಧಿಕೃತವಾಗಿ ಬೇಕರಿಗಳಲ್ಲಿ ಸಿಗರೇಟ್‌ಗಳನ್ನು ಮಾರಾಟ ಮಾಡುವುದನ್ನು ಕಂಡುಬಂದಿದ್ದು ಕೂಡಲೆ ಕ್ರಮವಹಿಸಲು ಸೂಚಿಸಿದರು.

ಕ್ರಮ ಹಿರಿಯ ಆರೋಗ್ಯ ಪರೀವಿಕ್ಷಕರು & ಕಿರಿಯ ಆರೋಗ್ಯ ಪರೀವಿಕ್ಷಕರು ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಕೂಡಲೆ ಕ್ರಮ ವಹಿಸಲು ಸೂಚಿಸಿದರು.

- ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿರುವುದು

1. ವಾರ್ಡ್ ವ್ಯಾಪ್ತಿಯಲ್ಲಿನ ಆದರ್ಶ್ ನಗರ 3,4,5ನೇ ಕ್ರಾಸ್‌ಗಳಲ್ಲಿ ನೀರಿನ ಸಮಸ್ಯೆಗಳನ್ನು ಕೂಡಲೆ ಪರಿಹರಿಸಬೇಕಾಗಿ ಸಹಾಯಕ ಅಭಿಯಂತರರಿಗೆ ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿ ಅಸಮವಾಗಿರುವ (Uneven Surface) ಮ್ಯಾನ್ ಹೋಲ್‌ಗಳನ್ನು ಗುರುತ್ತಿಸಿ ದುರಸ್ತಿಗೊಳಿಸಲು ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯಲ್ಲಿ ಕಾವೇರಿನಗರ ಎ ಬ್ಲಾಕ್‌ನಲ್ಲಿ ಸ್ಯಾನಿಟರಿ ಬ್ಲಾಕ್ ಆಗಿರುವುದನ್ನು ಕೂಡಲೆ ಪರೀಹರಿಸಲು ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳನ್ನು ಪರಿಹರಿಸುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

- ಕಂದಾಯ ಇಲಾಖೆಗೆ ಸಂಬಂಧಿಸಿರುವುದು

1. ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ವಸೂಲಾತಿ ಬಗ್ಗೆ ಬೇಡಿಕೆ ಹಾಗೂ ಪಾವತಿ ಬಾಕಿ ಇರುವ ವಿವರಗಳೊಂದಿಗೆ ಕಂದಾಯ ಪರಿವೀಕ್ಷಕರು ಮುಂದಿನ ಸಭೆಗೆ ಹಾಜರಾಗಲು ಸೂಚಿಸಿದರು.

ಕ್ರಮ : ಕಂದಾಯ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ವಸೂಲಾತಿಯ ವರದಿಯನ್ನು ಮುಂದಿನ ಸಭೆಯಲ್ಲಿ ಹಾಜರುಪಡಿಸುತ್ತೇನೆ ಎಂದು ಪ್ರತಿಕ್ರಿಯೆ ನೀಡಿದರು.

- ಅರಣ್ಯ ಇಲಾಖೆಗೆ ಸಂಬಂದಿಸಿರುವುದು

1. ವಾರ್ಡ್ ವ್ಯಾಪ್ತಿಯ ಮರಗಳಲ್ಲಿ ನಿರ್ಜೀವವಾದ ರೆಂಬೆ ಕೊಂಬೆಗಳಿದ್ದು ಇವುಗಳನ್ನು ಕೂಡಲೆ ತೇರುವುಗೋಳಿಸಲು ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗೆ ಪರಿಹರಿಸುವಂತೆ ಅರಣ್ಯಾಧಿಕಾರಿಗಳಿಗೆ ಈ ಸಭೆ ಮುಂಖಾಂತರ ಸೂಚಿಸಲಾಯಿತು.

- <u>ಪಶು ಪಾಲನೆ ಇಲಾಖೆಗೆ ಸಂಬಂಧಿಸಿರುವುದು</u>

  1. ವಾರ್ಡ್ ವ್ಯಾಪ್ತಿಯ ಬೀದಿನಾಯಿಗಳ ಸಮಸ್ಯೆ ಹೆಚ್ಚಾಗಿದ್ದು ಕೂಡಲೆ ಪರಿಹರಿಸಲು ಸೂಚಿಸಿದರು.

  ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗೆ ಪರಿಹರಿಸುವಂತೆ ಪಶು ಪಾಲನೆ ಸಹಾಯಕ ನಿರ್ದೇಶಕರು (ಪೂರ್ವ) ರವರಿಗೆ ಈ ಸಭೆ ಮುಂಖಾಂತರ ಸೂಚಿಸಲಾಯಿತು.

- <u>ಪೊಲೀಸ್ ಇಲಾಖೆಗೆ (ಸಿವಿಲ್) ಸಂಬಂಧಿಸಿರುವುದು</u>

  1. ವಾರ್ಡ್ ವ್ಯಾಪ್ತಿಯಲ್ಲಿ ಗಾಂಜಾ ಸೇವನೆ, ಮದ್ಯ ಕುಡಿಯುವುದು, ಕಳ್ಳರ ಹಾವಳಿ ಹೆಚ್ಚಾಗಿ ಕಂಡುಬಂದಿದ್ದು ಪೊಲೀಸ್ ಇಲಾಖೆ ಸಭೆಗೆ ಹಾಜಾರಾದೆ ಇರುವ ಕಾರಣದಿಂದ ಮುಂದಿನ ಸಭೆಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಕೇಳಿಸಿಕೊಳ್ಳಲು ತಪ್ಪದೆ ಸಭೆಗೆ ಹಾಜರಾಲು ಸೂಚಿಸಿದೆ.

- <u>ಪೊಲೀಸ್ ಇಲಾಖೆಗೆ (ಟ್ರಾಫಿಕ್) ಸಂಬಂಧಿಸಿರುವುದು</u>

  1. ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ವಾಹನಗಳ ನೀಲುಗಡೆ, ನಿರ್ಜೀವವಾದ ವಾಹನಗಳ (Dead Vehical) ತೆರುವುಗೊಳಿಸುದು...ಇತೆರೆ ಸಮಸ್ಯೆಗಳು ಹಾಲಿಸಲು ಪೊಲೀಸ್ ಇಲಾಖೆ ಸಭೆಗೆ ಹಾಜಾರಾದೆ ಇರುವ ಕಾರಣದಿಂದ ಮುಂದಿನ ಸಭೆಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಕೇಳಿಸಿಕೊಳ್ಳಲು ತಪ್ಪದೆ ಸಭೆಗೆ ಹಾಜರಾಲು ಸೂಚಿಸಿದೆ.

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

6/11/12

ಸದಸ್ಯ ಕಾರ್ಯದರ್ಶಿ ವಾರ್ಡ್ –32

<u>ಪ್ರತಿಗಳನ್ನು:</u>

1. ಮಾನ್ಯ ಆಡಳಿತಾಧಿಕಾರಿರವರ ಅಪ್ತ ಶಾಖೆಗೆ ಸಲ್ಲಿಸಿ ಆಡಳಿತಾಧಿಕಾರಿರವರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಆಯುಕ್ತರುರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೋರಿದೆ
3. ಮಾನ್ಯ ವಲಯ ಆಯುಕ್ತರುರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೋರಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಅಪ್ತಶಾಖೆಗೆ ಸಲ್ಲಿಸಿ ಅಯುಕ್ತರವರ ಗಮನಕ್ಕೆ ತರಲು ಕೋರಿದೆ.
5. ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ-ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.

8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಹಿರಿಯ ವೈದ್ಯಾಧಿಕಾರಿಗಳು (ಪುಲಿಕೇಶಿನಗರ) ರವರ ಮಾಹಿತಿಗಾಗಿ ಸಲ್ಲಿಸಿದೆ
13. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
14. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಆರ್.ಟಿ.ನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
15. ಪೊಲೀಸ್ ಇನ್ಸ್‌ಪೆಕ್ಟರ್ (ಟ್ರಾಫಿಕ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
16. ಪೊಲೀಸ್ ಇನ್ಸ್‌ಪೆಕ್ಟರ್(ಟ್ರಾಫಿಕ್) ಆರ್.ಟಿ.ನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
17. ಸಹಾಯಕ ನಿರ್ದೇಶಕರು (ಪೂರ್ವ) ಪಶು ಪಾಲನೆ ಇಲಾಖೆ ರವರ ಮಾಹಿತಿಗಾಗಿ ಸಲ್ಲಿಸಿದೆ.
18. ವಲಯ ಅರಣ್ಯಾಧಿಕಾರಿಗಳು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
19. ಕಛೇರಿ ಪ್ರತಿ.